# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2138
ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 25.03.2021
ಉತ್ತರಿಸುವ ಸಚಿವರು : ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮೈಸೂರು ನಗರ ಮಹಾರಾಜ ಕಾಲೇಜು ಮೈದಾನದ ಬಳಿ ಹಾಗೂ ಅಲ್ಲಿರುವ ಮಹಿಳಾ ವಿದ್ಯಾರ್ಥಿ ನಿಲಯದ ಬಳಿ ಪುಂಡು ಪೋಕರಿಗಳ ಹಾವಳಿ ಹೆಚ್ಚಾಗಿದ್ದು, ಅಲ್ಲಿ ಸಂಚರಿಸುವ ಸುತ್ತಮುತ್ತಲಿನ ವಿದ್ಯಾರ್ಥಿನಿಯರಿಗೆ ಹಾಗೂ ಮಹಿಳೆಯರಿಗೆ ದಿನನಿತ್ಯ ತೊಂದರೆ-ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಇಲ್ಲ. |
| ಆ | ಹಾಗಿದ್ದಲ್ಲಿ, ಈ ಬಗ್ಗೆ ವಿದ್ಯಾರ್ಥಿನಿಯರಿಂದ ದೂರುಗಳು ಬಂದಿವೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸೂಕ್ತ ಕ್ರಮ ಜರುಗಿಸಿ ವಿದ್ಯಾರ್ಥಿನಿಯರಿಗೆ/ ಮಹಿಳೆಯರಿಗೆ ನಿರ್ಭಯ ವಾತಾವರಣ ಉಂಟು ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? | ವಿದ್ಯಾರ್ಥಿನಿಯರಿಂದ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ.<br><br>ಆದಾಗ್ಯೂ ಮುನ್ನೆಚ್ಚರಿಕೆ ಕ್ರಮವಾಗಿ 112 ತುರ್ತು ಸ್ಪಂದನ ವಾಹನ, ಚೀತಾ ದ್ವಿಚಕ್ರ ವಾಹನ ಹಾಗೂ ಹಗಲು ಗಸ್ತಿನ ಸಿಬ್ಬಂದಿಗಳನ್ನು ಆಗಾಗ್ಗೆ ಮಹಾರಾಜ ಕಾಲೇಜು ಮೈದಾನದ ಬಳಿ ಹಾಗೂ ಅಲ್ಲಿರುವ ಮಹಿಳಾ ವಿದ್ಯಾರ್ಥಿ ನಿಲಯದ ಬಳಿ ಗಸ್ತು ಮಾಡಲಾಗುತ್ತಿದೆ. |

**ಹೆಚ್‌ಡಿ 214 ಎಸ್‌ಎಸ್‌ಟಿ 2021**

(ಬಸವರಾಜ ಬೊಮ್ಮಾಯಿ)
ಗೃಹ ಮತ್ತು ಕಾನೂನು, ಸಂಸದೀಯ
ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು